**ಕರ್ನಾಟಕ ಸರ್ಕಾರ**

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/110/ಪ್ರಾ.ಪ್ರಭಾರ/2022

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:21-06-2022.

**ಸುತ್ತೋಲೆ**

ವಿಷಯ: ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಪ್ರಾಂಶುಪಾಲರ ಹುದ್ದೆಗೆ ಅರ್ಹ ಸಹ/ಸಹಾಯಕ ಪ್ರಾಧ್ಯಾಪಕರನ್ನು ತಾತ್ಕಾಲಿಕವಾಗಿ ಅನ್ಯ ಕಾರ್ಯ ನಿಮಿತ್ತ ಪ್ರಭಾರದಲ್ಲಿರಿಸುವ ಬಗ್ಗೆ.

ಉಲ್ಲೇಖ: ಈ ಕಛೇರಿ ಸಮ ಸಂಖ್ಯೆ ಸುತ್ತೋಲೆ ದಿ:09-06-2022.

*****

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿಯಿರುವ ಪ್ರಾಂಶುಪಾಲರ ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡುವವರೆಗೆ ಕಾಲೇಜಿನ ಆಡಳಿತಾತ್ಮಕ ಮತ್ತು ಶೈಕ್ಷಣಿಕ ಹಿತದೃಷ್ಟಿಯಿಂದ ಯು.ಜಿ.ಸಿ ಮಾರ್ಗಸೂಚಿಗಳಂತೆ 15 ವರ್ಷಗಳ ಸೇವಾವಧಿ ಪೂರೈಸಿರುವ ಹಾಗೂ ಪಿ.ಹೆಚ್.ಡಿ ಪದವಿಯನ್ನು ಹೊಂದಿರುವ ಸಹ ಪ್ರಾಧ್ಯಾಪಕರನ್ನು ತಾತ್ಕಾಲಿಕವಾಗಿ ಅನ್ಯ ಕಾರ್ಯ ನಿಮಿತ್ತ ಪ್ರಾಂಶುಪಾಲರ ಸರ್ಕಾರವು ಅನುಮತಿ ನೀಡಿದ್ದ ಹಿನ್ನೆಲೆಯಲ್ಲಿ ಅಧೀನ ಸರ್ಕಾರಿ ಪ್ರಥಮದರ್ಜೆ ಕಾಲೇಜುಗಳಿಂದ EMIS ನಲ್ಲಿ ದಾಖಲಿಸಿರುವ ಮಾಹಿತಿ ಆಧರಿಸಿ ಸಹ/ಸಹಾಯಕ ಪ್ರಾಧ್ಯಾಪಕರುಗಳಲ್ಲಿ ಪಿ.ಹೆಚ್.ಡಿ ಪದವಿಯೊಂದಿಗೆ 15 ವರ್ಷಗಳಿಗಿಂತ ಹೆಚ್ಚು ಸೇವಾವಧಿ ಪೂರೈಸಿರುವವರ ಪಟ್ಟಿಯನ್ನು ಸಿದ್ದಪಡಿಸಿ ಸದರಿ ಪಟ್ಟಿಗಳಿಗೆ ಸಂಬಂಧಿಸಿದಂತೆ ವ್ಯತ್ಯಾಸಗಳಿದ್ದಲ್ಲಿ ದಿನಾಂಕ: 15-06-2022 ರ ಒಳಗಾಗಿ ಇ-ಮೇಲ್ **dce.oodprincipal2022@gmail.com** ವಿಳಾಸಕ್ಕೆ ಪೂರಕ ದಾಖಲಾತಿಗಳೊಂದಿಗೆ ಸಲ್ಲಿಸುವಂತೆ ಸೂಚಿಸಲಾಗಿತ್ತು.

**ಸ್ವೀಕೃತಿಯಾಗಿರುವ ಆಕ್ಷೇಪಣೆ/ಮನವಿಗಳನ್ನು ಪರಿಶೀಲಿಸಲಾಗಿ ಬಹುತೇಕ ಬೋಧಕರು ಪಿ.ಹೆಚ್.ಡಿ ಪದವಿಯನ್ನು ಹೊಂದಿದ್ದರೂ ಇಎಂಐಎಸ್ ತಂತ್ರಾಂಶದಲ್ಲಿ ನಮೂದಿಸದೇ ಇರುವುದರಿಂದ ಪಟ್ಟಿಯಲ್ಲಿ ಸೇರಿಸುವಂತೆ, ಪ್ರಸ್ತುತ ಕಾರ್ಯ ನಿರತ ಕಾಲೇಜಿನ ಮಾಹಿತಿ ಹಾಗೂ ಕೆ.ಜಿ.ಐ.ಡಿ ಸಂಖ್ಯೆ ತಪ್ಪಾಗಿರುವ ಬಗ್ಗೆ ಮನವಿಗಳನ್ನು ಸಲ್ಲಿಸಿ ತಿದ್ದುಪಡಿ ಮಾಡಲು ಕೋರಿರುತ್ತಾರೆ.**

**ಪ್ರಯುಕ್ತ ಸಂಬಂಧಪಟ್ಟ ಬೋಧಕರು ತಮ್ಮ ವೈಯಕ್ತಿಕ ಗಮನಹರಿಸಿ ಅಗತ್ಯ ಮಾಹಿತಿಯನ್ನು (ಪಿ.ಹೆಚ್.ಡಿ. ಪದವಿ ಪಡೆದಿರುವ ಬಗ್ಗೆ/ ಲೀನ್ ಹೊಂದಿರುವ ಕಾಲೇಜಿನ ಮಾಹಿತಿ/ಇಲಾಖೆಯಲ್ಲಿ ಸಹಾಯಕ ಪ್ರಾಧ್ಯಾಪಕರಾಗಿ ಕರ್ತವ್ಯಕ್ಕೆ ವರದಿ ಮಾಡಿಕೊಂಡ ದಿನಾಂಕ/ ಕೆ.ಜಿ.ಐ.ಡಿ. ಸಂಖ್ಯೆ/ ಜೇಷ್ಠತಾಪಟ್ಟಿ ಕ್ರಮ ಸಂಖ್ಯೆ ಇತ್ಯಾದಿ) ಪ್ರಾಂಶುಪಾಲರ ಮೂಲಕ ಇಎಂಐಎಸ್ ತಂತ್ರಾಂಶದಲ್ಲಿ ದಿನಾಂಕ: 24-06-2022ರ ಒಳಗಾಗಿ ಕಡ್ಡಾಯವಾಗಿ UPDATE ಮಾಡುವಂತೆ ಸೂಚಿಸಲಾಗಿದೆ. ನಂತರ ಬದಲಾವಣೆಗೆ ಅವಕಾಶ ನೀಡಲಾಗುವುದಿಲ್ಲ.**

**ಮುಂದುವರೆಯುತ್ತಾ ಅಧೀನ ಕಾಲೇಜುಗಳ ಪ್ರಾಂಶುಪಾಲರು ತಮ್ಮ ಕಾಲೇಜುಗಳಲ್ಲಿ ಲೀನ್ ಹೊಂದಿರುವ ಬೋಧಕೇತರ ಸಿಬ್ಬಂದಿಯವರ ಮಾಹಿತಿಯನ್ನು ಸಹ ನಿಗದಿತ ದಿನಾಂಕದೊಳಗಾಗಿ ಇಎಂಐಎಸ್ ತಂತ್ರಾಂಶದಲ್ಲಿ ಅಪ್‌ಡೇಟ್ ಮಾಡುವಂತೆ ಸೂಚಿಸಲಾಗಿದೆ.**

***(ಮಾನ್ಯ ಆಯುಕ್ತರ ಆದೇಶದ ಮೇರೆಗೆ)***

21/06/2022

**ಮುಖ್ಯ ಆಡಳಿತಾಧಿಕಾರಿಗಳು**
**ಕಾಲೇಜು ಶಿಕ್ಷಣ ಇಲಾಖೆ**

**ಇವರಿಗೆ:**

1. ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಭಾರ ಪ್ರಾಂಶುಪಾಲರುಗಳಿಗೆ.
2. ಸಂಬಂಧಪಟ್ಟ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಹ/ಸಹಾಯಕ ಪ್ರಾಧ್ಯಾಪಕರುಗಳಿಗೆ.

**ಪ್ರತಿಯನ್ನು - ಮಾಹಿತಿಗಾಗಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿ ಕಟ್ಟಡ, ಬೆಂಗಳೂರು.
2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಪ್ರಾದೇಶಿಕ ಕಛೇರಿ, ಬೆಂಗಳೂರು/ಮೈಸೂರು/ಧಾರವಾಡ/ಕಲಬುರಗಿ/ ಮಂಗಳೂರು/ ಶಿವಮೊಗ್ಗ.
3. ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
4. ಕಛೇರಿ ಪ್ರತಿ.

*DCE 110 Incharge Principal*